



ಅರುಣ ಪಿ. ಭಟ್ಟ

## 12.12.2019 ರಿಂದ 18.12.2019ರ ವರೆಗೆ



### ಮೇಷ

ನಿಮ್ಮ ವಿಶ್ವಾಸ ಬೆಳೆಯುತ್ತದೆ. ವೆಚ್ಚ ಏರಿದರೂ ಆದಾಯದಲ್ಲಿನ ಹೆಚ್ಚಳ ಖರ್ಚುಗಳನ್ನು ಸರಿದೂಗಿಸುತ್ತದೆ. ನಿಮ್ಮ ಅಭಿಪ್ರಾಯಗಳನ್ನು ಇತರರ ಮೇಲೆ ಹೇರಬೇಡಿ. ನಿಮ್ಮ ಸ್ಪರ್ಧಾತ್ಮಕ ಸ್ವಭಾವ ಹೆಚ್ಚಾಗುತ್ತದೆ.

**ಶುಭದಿನ 14. ಶ್ರೀ ದುರ್ಗಾ ಆರಾಧನೆ ಮಾಡಿರಿ.**



### ವೃಷಭ

ವಾರದ ಶುರುವಿನಿಂದಲೇ ವೃತ್ತಿಪರ ಜೀವನದಲ್ಲಿ ಉತ್ತಮ ಅವಕಾಶಗಳು ದೊರೆಯಲಿವೆ. ಅದರ ಫಲಿತವಾಗಿ ಸರಿಯಾದ ಸಮಯಕ್ಕೆ ಕೆಲಸ ಕಾರ್ಯಗಳು ಪೂರ್ಣಗೊಳ್ಳಲಿವೆ. ಮಕ್ಕಳಿಗೆ ಸಹಾಯ ಮಾಡಲಿದ್ದೀರಿ.

**ಶುಭದಿನ 12. ಹನುಮಾನ್ ಚಾಲೀಸ್ ಓದಿರಿ.**



### ಮಿಥುನ

ದಾನ ಧರ್ಮ ಕಾರ್ಯಗಳಲ್ಲಿ ಆಸಕ್ತಿ ಮೂಡುತ್ತದೆ. ಅದಕ್ಕೆ ನಿಮ್ಮ ಕುಟುಂಬದ ಬೆಂಬಲವೂ ದೊರೆಯುತ್ತದೆ. ನಿಮ್ಮ ತಾಯಿಯವರ ಅನಾರೋಗ್ಯ ಆತಂಕಕ್ಕೆ ಗುರಿ ಮಾಡಬಹುದು. ಆದಾಯ ಮೂಲಗಳಿಂದ ಉತ್ತಮ ವರಮಾನ.

**ಶುಭದಿನ 13. ಗಣಪತಿಗೆ 108 ದೂರ್ವಾರ್ಚನೆ ಮಾಡಿರಿ.**



### ಕಟಕ

ನಿಮ್ಮ ಸಾಮರ್ಥ್ಯವನ್ನು ಬಳಕೆ ಮಾಡಿಕೊಳ್ಳುತ್ತೀರಿ. ಇದರಿಂದ ಮುಂಬರುವ ದಿನಗಳಲ್ಲಿ ಅನುಕೂಲ ಆಗುತ್ತದೆ. ಆರೋಗ್ಯದಲ್ಲಿ ಏರುಪೇರಾಗುವ ಸಾಧ್ಯತೆಗಳಿವೆ. ಕುಟುಂಬದ ಸದಸ್ಯರ ಜತೆಗೆ ಉತ್ತಮ ಬಾಂಧವ್ಯ ಇರುತ್ತದೆ.

**ಶುಭದಿನ 14. ವಿಷ್ಣು ಸಹಸ್ರನಾಮ ಓದಿರಿ.**



### ಸಿಂಹ

ಭೂಮಿಗೆ ಸಂಬಂಧಿಸಿದ ವ್ಯಾಜ್ಯಗಳು ಕೋರ್ಟ್‌ನಲ್ಲಿ ಇದ್ದರೆ ಅವುಗಳನ್ನು ನಿವಾರಿಸಿಕೊಳ್ಳುವ ನಿಟ್ಟಿನಲ್ಲಿ ಹೆಚ್ಚು ಶ್ರಮ ಪಡಬೇಕಾಗುತ್ತದೆ. ವಾರದ ಅಂತ್ಯಕ್ಕೆ ಸರಿಯುತ್ತಾ ಧಾರ್ಮಿಕ ಕ್ಷೇತ್ರಗಳಿಗೆ ಭೇಟಿ ನೀಡುವ ಆಲೋಚನೆ ಮಾಡುತ್ತೀರಿ.

**ಶುಭದಿನ 16 ಕಾಲಭೈರವನ ಸೇವೆ ಮಾಡಿರಿ.**



### ಕನ್ಯಾ

ನಿಮ್ಮ ಸಂಬಂಧಿಕರ ಭೇಟಿ ಸಾಧ್ಯತೆ ಇದೆ. ಕೆಲ ಮುಖ್ಯವಾದ ವಿಚಾರಗಳನ್ನು ಅವರ ಜತೆ ಚರ್ಚೆ ಮಾಡಲಿದ್ದೀರಿ. ಹೆಚ್ಚಿನ ಖರ್ಚು ಆಗಲಿದೆ. ಉದ್ಯೋಗದಲ್ಲಿ ಒತ್ತಡ ಹೆಚ್ಚಾಗುತ್ತದೆ. ಭೂಮಿ ಖರೀದಿಗೆ ಮನಸ್ಸು ಮಾಡುತ್ತೀರಿ.

**ಶುಭದಿನ 15. ದೇವ್ಯಪರಾಧ ಕ್ಷಮಾಪನಾ ಸ್ತೋತ್ರ 18 ಸಾರೆ ಪಠಿಸಿ.**



### ತುಲಾ

ವೃತ್ತಿಪರ ಜೀವನದಲ್ಲಿ ಉತ್ತಮವಾದ ಅವಕಾಶಗಳು ದೊರೆಯಲಿವೆ. ಕೌಟುಂಬಿಕ ವಿಷಯಗಳಲ್ಲಿ ಪ್ರಗತಿ ಕಾಣಲಿದೆ. ವ್ಯಾಪಾರ ವ್ಯವಹಾರಗಳಲ್ಲಿ ಪ್ರಗತಿ ಕಾಣಿಸುತ್ತದೆ. ನಿಮ್ಮ ಆರೋಗ್ಯ ಕೂಡ ಉತ್ತಮವಾಗಿರುತ್ತದೆ.

**ಶುಭದಿನ 17. ದಕ್ಷಿಣಾಮೂರ್ತಿ ಸ್ತೋತ್ರ ಪಠಣ ಮಾಡಿರಿ.**



### ವೃಶ್ಚಿಕ

ಉದ್ಯೋಗಸ್ಥರು ನಿಮಗೆ ವಹಿಸಿದ ಕೆಲಸಗಳನ್ನು ಪೂರೈಸಲು ಯಶಸ್ವಿ ಆಗುತ್ತೀರಿ. ವ್ಯಾಪಾರ ವ್ಯವಹಾರ ಪ್ರಗತಿಗೆನಿಮ್ಮ ಶ್ರಮದ ಸಹಾಯ ಆಗುತ್ತದೆ. ನಿಮ್ಮ ಸಿಬ್ಬಂದಿಯ ಆತ್ಮಸ್ಥೈರ್ಯ ಹೆಚ್ಚಿಸುವಲ್ಲಿ ಸಫಲರಾಗುತ್ತೀರಿ.

**ಶುಭದಿನ 16. ಲಕ್ಷ್ಮೀ ನಾರಾಯಣ ಹೃದಯ ಪಾರಾಯಣ ಮಾಡಿರಿ.**



### ಧನಸ್ಸು

ಹಣಕಾಸು ಹೂಡಿಕೆಯಲ್ಲಿ ಪ್ರಗತಿ ಕಾಣಲಿದ್ದೀರಿ. ಬಾಹ್ಯ ಚಟುವಟಿಕೆಗಳು ಈ ಹಿಂದಿನಂತೆಯೇ ನಡೆಯುತ್ತವೆ. ತಲೆನೋವು, ಕಣ್ಣಿಗೆ ಸಂಬಂಧಿಸಿದ ತೊಂದರೆ ಹಾಗೂ ಹಲ್ಲು ನೋವು ಕಾಡಬಹುದು.

**ಶುಭದಿನ 23. ಈಶ್ವರನಿಗೆ ರುದ್ರಾಭಿಶೇಕ ಮಾಡಿಸಿ.**



### ಮಕರ

ವಾರದ ಶುರುವಿನಿಂದಲೇ ನಿಮ್ಮ ಅದೃಷ್ಟ ಚೆನ್ನಾಗಿದೆ. ನಿಮ್ಮ ಕೆಲಸಗಳನ್ನು ಪೂರ್ಣಗೊಳಿಸುವ ನಿಟ್ಟಿನಲ್ಲಿ ಹಿಂದೆಂದಿಗಿಂತಲೂ ಹೆಚ್ಚು ಚಟುವಟಿಕೆಯಿಂದ ಕಾಣಿಸಿಕೊಳ್ಳುತ್ತಿರಿ. ತಂದೆಯ ಜತೆಗೆ ಮನಸ್ತಾಪ. ಈ ಬಗ್ಗೆ ಎಚ್ಚರಿಕೆಯಿಂದ ಇರಬೇಕು.

**ಶುಭದಿನ 15. ಮಾರುತಿ ಗುಡಿಗೆ ಮುಖ ನೋಡಿದ ಎಣ್ಣೆ ನೀಡಿರಿ.**



### ಕುಂಭ

ವ್ಯಾಪಾರ ವ್ಯವಹಾರ ಮಾಡುತ್ತಿರುವವರು ಅದನ್ನು ಮುಂದಿನ ಹಂತಕ್ಕೆ ತೆಗೆದುಕೊಂಡು ಹೋಗಲು ಯತ್ನಿಸುತ್ತೀರಿ. ನಿಮ್ಮ ಶ್ರಮಕ್ಕೆ ಯಶಸ್ಸು ದೊರೆಯುತ್ತದೆ. ನಿಮ್ಮ ಆರೋಗ್ಯ ಚೆನ್ನಾಗಿರುತ್ತದೆ. ವೈವಾಹಿಕ ಜೀವನ ಸಂತೋಷವಾಗಿರುತ್ತದೆ.

**ಶುಭದಿನ 16. ಸುಬ್ರಹ್ಮಣ್ಯ ಜಪ ಮಾಡಿರಿ.**



### ಮೀನ

ನಿಮ್ಮ ಕೆಲಸ ಕಾರ್ಯಗಳನ್ನು ಇನ್ನಷ್ಟು ಒಪ್ಪ ಓರಣವಾಗಿ ಮಾಡಲು ಇನ್ನೂ ಹೆಚ್ಚಿನ ಶ್ರಮ ಹಾಕುತ್ತೀರಿ. ನಿಮ್ಮ ಮೇಲಾಧಿಕಾರಿಗಳು ಸೂಚನೆ ನೀಡಿ, ಕೆಲಸದ ವೇಗವನ್ನು ಮತ್ತಷ್ಟು ಹೆಚ್ಚಿಸಿಕೊಳ್ಳುವಂತೆ ಸೂಚನೆ ನೀಡುತ್ತಾರೆ.

**ಶುಭದಿನ 14. ನವದುರ್ಗಾ ಆರಾಧನೆ ಮಾಡಿರಿ.**

DHEEPAM
LAMP OIL
BLEND OF 5 OILS
ದೀಪದ ಬೆಳಕಲ್ಲಿ
ಒಂದು ದೈವೀಕ
ಅನುಭವ
ಸುಗಂಧ ಸುವಾಸನೆ
ಹರಡುವ ಪಂಚ ದೀಪ ಎಣ್ಣೆ
